# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1979 (2248) |
| ಸದಸ್ಯರ ಹೆಸರು | | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 21.03.2022 |
| ಉತ್ತರಿಸಬೇಕಾದ ಸಚಿವರು | | ಮಾನ್ಯ ಉನ್ನತ ಶಿಕ್ಷಣ ಸಚಿವರು |
| **ಪ್ರಶ್ನೆ** | | **ಉತ್ತರ** |
| ಅ) | ಕಾಲೇಜು ಶಿಕ್ಷಣ ಇಲಾಖೆಯ ಬೋಧಕೇತರ ನೌಕರರುಗಳ ಜೇಷ್ಠತಾ ಪಟ್ಟಿಯನ್ನು ಕಳೆದ 03 ವರ್ಷಗಳಿಂದ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿರುತ್ತದೆ. |
| ಆ) | ಕಳೆದ 03 ವರ್ಷಗಳಿಂದ ಪ್ರಕಟಿಸದಿರಲು ಕಾರಣವೇನು ; (ವಿವರ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆಯ ಬೋಧಕೇತರ ನೌಕರರ ಅಂತಿಮ ಜೇಷ್ಠತಾ ಪಟ್ಟಿಯನ್ನು ಈ ಹಿಂದೆ ದಿನಾಂಕ: 30.06.2019ರಲ್ಲಿದ್ದಂತೆ ಪ್ರಕಟಿಸಲಾಗಿರುತ್ತದೆ.<br><br>ದಿನಾಂಕ: 30.06.2021ರಲ್ಲಿದ್ದಂತೆ ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು, ಮ್ಯಾನೇಜರ್ ಮತ್ತು ಅಧೀಕ್ಷಕರ ವೃಂದದ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಗಳನ್ನು ಕ್ರಮವಾಗಿ ದಿನಾಂಕ: 04.10.2021, ದಿನಾಂಕ: 02.08.2021, ದಿನಾಂಕ: 02.08.2021 ಹಾಗೂ ದಿನಾಂಕ: 31.07.2021 ರಲ್ಲಿ ಪ್ರಕಟಿಸಿ, ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಕಾಶ ನೀಡಲಾಗಿರುತ್ತದೆ.<br><br>ಉಳಿಕೆ ವೃಂದಗಳಾದ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ಬೆರಳಚ್ಚುಗಾರರು, ಹಿರಿಯ ಬೆರಳಚ್ಚುಗಾರರು, ಅಟೆಂಡರ್, ಪರಿಚಾರಕರು, ಹಿರಿಯ ವಾಹನ ಚಾಲಕರು ಹಾಗೂ ಕಿರಿಯ ವಾಹನ ಚಾಲಕರುಗಳ ಕರಡು ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕರಡನ್ನು ಅಂತಿಮಗೊಳಿಸಲಾಗಿರುತ್ತದೆ. ಈ ಮಧ್ಯೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/106/ಸನೆನಿ/2021, ದಿನಾಂಕ: 10.12.2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು |

| | | |
|---|---|---|
| | | ಭರ್ತಿ ಮಾಡುವಾಗ ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ, ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಿದ್ದು, ಸದರಿ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ತಿಳಿಸಿರುವಂತೆ ಎಲ್ಲಾ ವೃಂದದ ಜ್ಯೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ, ಪರಿಷ್ಕೃತ ಪಟ್ಟಿಯನ್ನು ಸಿದ್ದಪಡಿಸುವ ಸಂಬಂಧ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಇದರಿಂದ ಅರ್ಹ ನೌಕರರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಪ್ರಸ್ತುತ ಜಾರಿಯಲ್ಲಿರುವ ಅಂತಿಮ ಜ್ಯೇಷ್ಠತಾ ಪಟ್ಟಿಯನುಸಾರ ಈಗಾಗಲೇ ವಿವಿಧ ವೃಂದಗಳ ಅರ್ಹ ಅಭ್ಯರ್ಥಿಗಳಿಗೆ ಕಾಲಾನುಕಾಲಕ್ಕೆ ಖಾಲಿ ಹುದ್ದೆಗಳಿಗೆ ಎದುರಾಗಿ ಬಡ್ತಿ ನೀಡಲಾಗುತ್ತಿದೆ. |
| ಈ) | ಸರ್ಕಾರದ ಆದೇಶಗಳನ್ವಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಅವಧಿಯೊಳಗೆ ಸೇವಾ ಜೇಷ್ಠತಾ ಪಟ್ಟಿ ಪ್ರಕಟಿಸದಿರುವುದು ಸರ್ಕಾರದ ಆದೇಶಗಳನ್ನು ಉಲ್ಲಂಘನೆ ಮಾಡಿದಂತಲ್ಲವೇ ? | ಕೋವಿಡ್-19 ರ ಕಾರಣದಿಂದ ಸಕಾಲದಲ್ಲಿ ಕರಡು ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ವಿಳಂಬವಾಗಿದ್ದು, ತ್ವರಿತವಾಗಿ ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ. |
| ಉ) | 2022 ರ ಜೇಷ್ಠತಾ ಪಟ್ಟಿಯನ್ನು ಯಾವಾಗ ಪ್ರಕಟಿಸಲಾಗುವುದು ? (ವಿವರ ನೀಡುವುದು) | |

**ಸಂಖ್ಯೆ: ಇಡಿ 42 ಯುಇಸಿ 2022**

**(ಡಾ: ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.